278(96)

ಶ್ರೀ ಕೃಷ್ಣಮೂರ್ತಿ ಕೆ.ಎಂ.(ಕಡೂರು): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಮಗಳೂರು ಜಿಲ್ಲೆಯ ಕಡೂರು ಮತ್ತು ತರೀಕೆರೆ ತಾಲ್ಲೂಕಿನಲ್ಲಿ ನೆಲೆಸಿರುವ ತೆಲಗೌಂಡರ್ ಜನಾಂಗದವರು ಶೈಕ್ಷಣಿಕವಾಗಿ, ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಹಿಂದುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಈ ಸಮುದಾಯದವರು ಶೈಕ್ಷಣಿಕವಾಗಿ ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಹಿಂದುಳಿದಿರುವಿಕೆಯನ್ನು ನೀಗುವ ವಿಷಯದಲ್ಲಿ ಸರಕಾರ ಕೈಗೊಂಡ ಕ್ರಮಗಳೇನು;

ಇ) ಈ ಸಮಾಜವನ್ನು ಹಿಂದುಳಿದ ವರ್ಗದವರ ಪಟ್ಟಿಯಲ್ಲಿ ಸೇರಿಸುವ ಬಗ್ಗೆ ರವಿವರ್ಮಾ ಹಿಂದುಳಿದ ಆಯೋಗದಲ್ಲಿ ಅವಕಾಶ ಕಲ್ಪಿಸಲಾಗಿದೆಯೆ?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಚಿಕ್ಕಮಗಳೂರು ಜಿಲ್ಲೆಯ ಕಡೂರು ಮತ್ತು ತರೀಕೆರೆ ತಾಲ್ಲೂಕಿನಲ್ಲಿ ನೆಲೆಸಿರುವ ತೆಲಗೌಂಡರ್ ಜನಾಂಗದವರಿಂದ, ಅವರ ಹಿಂದುಳಿದಿರುವಿಕೆ ಬಗೆಗೆ ಯಾವ ಮನವಿಯೂ ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಬೆಳಗಾಂ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ವಣ್ಣೂರ ಗ್ರಾಮದಲ್ಲಿ ಆಶ್ರಮ ಶಾಲೆ ಪ್ರಾರಂಭಿಸುವುದು.

279(230)

ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ(ಬೈಲಹೊಂಗಲ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂವ ಜಿಲ್ಲೆಯಲ್ಲಿ ಎಷ್ಟು ಆಶ್ರಮ ಶಾಲೆಗಳು ಇರುತ್ತದೆ;

ಆ) ಬೆಳಗಾಂವ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನಲ್ಲಿ ಎಷ್ಟು ಆಶ್ರಮ ಶಾಲೆಗಳು ಇರುತ್ತವೆ;

ಇ) ಬೆಳಗಾಂವ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನಲ್ಲಿ ವಣ್ಣೂರ ಗ್ರಾಮದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಜನ ಹೆಚ್ಚಿಗೆ ವಾಸಿಸುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಬೈಲಹೊಂಗಲ ತಾಲ್ಲೂಕಿನ ವಣ್ಣೂರು ಗ್ರಾಮದಲ್ಲಿ ಆಶ್ರಮ ಶಾಲೆಯನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಬೆಳಗಾಂ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಇಲಾಖೆಯ 7 ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ 1 ಒಟ್ಟು 8 ಆಶ್ರಮ ಶಾಲೆಗಳಿರುತ್ತವೆ.

ಆ) ಬೈಲಹೊಂಗಲ ತಾಲ್ಲೂಕಿನಲ್ಲಿ ಹಿಂದುಳಿದ ವರ್ಗಗಳ ಇಲಾಖೆಯ 2 ಆಶ್ರಮ ಶಾಲೆಗಳಿರುತ್ತವೆ.

ಇ) ಹೌದು.

ಈ) ಜಿಲ್ಲೆಯಿಂದ ಬೈಲಹೊಂಗಲ ತಾಲ್ಲೂಕಿನ ವಣ್ಣೂರು ಗ್ರಾಮದಲ್ಲಿ ಆಶ್ರಮ ಶಾಲೆ ಪ್ರಾರಂಭಿಸಲು ಹೊಸದಾಗಿ ಪ್ರಸ್ತಾವನೆ ಬಂದಲ್ಲಿ ಪರಿಶೀಲಿಸಲಾಗುವುದು.

ಆಶ್ರಮ ಶಾಲೆ ತೆರೆಯುವುದು.

280(234)

ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂ ಜಿಲ್ಲೆ ಸವದತ್ತಿ ತಾಲ್ಲೂಕಿನ ಹಿರೇಬೂದನೂರು ಗ್ರಾಮದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಜನರು ಹೆಚ್ಚಿಗೆ ವಾಸಿಸುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಜನರ ಅನುಕೂಲತೆಗಾಗಿ ಸವದತ್ತಿ ತಾಲ್ಲೂಕಿನ ಹಿರೇಬೂದನೂರು ಗ್ರಾಮದಲ್ಲಿ ಆಶ್ರಮಶಾಲೆಯನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?